## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಹಣಮಂತಪ್ಪ ಗಂಗಪ್ಪ ಗುಣಕಿ, ಸದಸ್ಯರು, ಹೂವಿನ ಹಿಪ್ಪರಗಿ ಗ್ರಾಮ ಪಂಚಾಯತಿ, ಬಸವನ ಬಾಗೇವಾಡಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ರಡಿ ಕ್ರಮ ಜರುಗಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1135 ಗ್ರಾಪಂಅ 2018 ದಿನಾಂಕ:02.02.2019.
2. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 62 ಗ್ರಾಪಂಅ 2019, ದಿ:15-02-2019.
3. ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ ಇವರ ಪತ್ರ ಹಾಗೂ ವಿಚಾರಣಾ ವರದಿ ಸಂಖ್ಯೆ:ಪ್ರಾಆಬೆ:ಜಿಪಂ:43(ಎ):ಸಿಆರ್-12:2018-19, ದಿ:01.01.2020.

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರಿ ಆದೇಶದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಡಿ ಗ್ರಾಮ ಪಂಚಾಯಿತಿ ಸದಸ್ಯರುಗಳು, ಪ್ರಕರಣ 48(4) ಮತ್ತು 48(5) ರಡಿ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರುಗಳ ಮೇಲೆ ದುರ್ವರ್ತನೆ, ಅಧಿಕಾರ ಮತ್ತು ಹಣ ದುರುಪಯೋಗಕ್ಕಾಗಿ ಕ್ರಮಕೈಗೊಳ್ಳುವ ಸಲುವಾಗಿ ವಿಚಾರಣೆ ನಡೆಸುವ ಅಧಿಕಾರವನ್ನು ಪ್ರಾದೇಶಿಕ ಆಯುಕ್ತರುಗಳಿಗೆ ವಹಿಸಲಾಗಿದೆ.

ಅದರಂತೆ, ಮೇಲೆ ಓದಲಾದ (2)ರ ಸರ್ಕಾರದ ಪತ್ರದಲ್ಲಿ ಶ್ರೀ ಹಣಮಂತಪ್ಪ ಗಂಗಪ್ಪ ಗುಣಕಿ, ಸದಸ್ಯರು, ಹೂವಿನ ಹಿಪ್ಪರಗಿ ಗ್ರಾಮ ಪಂಚಾಯತಿ, ಬಸವನ ಬಾಗೇವಾಡಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ರಡಿ ಕೆಳಕಂಡ ಆರೋಪದ ಮೇಲೆ ತನಿಖೆಯನ್ನು ನಡೆಸಲು ಕೋರಿರುತ್ತಾರೆ.

- ಶ್ರೀ ಹಣಮಂತಪ್ಪ ಗಂಗಪ್ಪ ಗುಣಕಿ, ಸದಸ್ಯರು, ಹೂವಿನ ಹಿಪ್ಪರಗಿ ಗ್ರಾಮ ಪಂಚಾಯತಿ, ಬಸವನ ಬಾಗೇವಾಡಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರು ಕೆರೆ ಸಂಘದ ಅಧ್ಯಕ್ಷರಾಗಿದ್ದ ಅವಧಿಯಲ್ಲಿ ಕೈಗೊಂಡ ಕೆರೆ ಕಾಮಗಾರಿಗಳ ಅನುಷ್ಠಾನದಲ್ಲಿ ಹಣ ದುರುಪಯೋಗ ಪಡಿಸಿಕೊಂಡಿರುವ ಆರೋಪದ ಬಗ್ಗೆ.

ಮೇಲೆ ಓದಲಾದ ಕ್ರಮಾಂಕ (3)ರ ಪ್ರಸ್ತಾವನೆಯಲ್ಲಿ ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ ಬೆಳಗಾವಿ, ಇವರು ತಮ್ಮ ವರದಿಯಲ್ಲಿ ಶ್ರೀ ಹಣಮಂತಪ್ಪ ಗಂಗಪ್ಪ ಗುಣಕಿ, ಸದಸ್ಯರು, ಹೂವಿನ ಹಿಪ್ಪರಗಿ ಗ್ರಾಮ ಪಂಚಾಯತಿ, ಬಸವನ ಬಾಗೇವಾಡಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ದದ ಆರೋಪಗಳಿಗೆ ಸಂಬಂಧಿಸಿದಂತೆ ವಿಚಾರಣೆಯನ್ನು ಜರುಗಿಸಲಾಗಿರುತ್ತದೆ. ವಿಚಾರಣೆ ಸಮಯದಲ್ಲಿ ವಾದಿ ಮತ್ತು ಪ್ರತಿವಾದಿಗಳ ವಾದ ವಿವಾದಗಳನ್ನು ಆಲಿಸಿ ಅವರುಗಳು ಸಲ್ಲಿಸಿದ ಲಿಖಿತ ಹೇಳಿಕೆಯನ್ನು ಹಾಗೂ ಪ್ರಕರಣಕ್ಕೆ ಸಂಬಂಧಪಟ್ಟ

ದಾಖಲೆಗಳನ್ನು ಪರಿಶೀಲಿಸಿದ್ದು, ಶ್ರೀ ಹಣಮಂತಪ್ಪ ಗಂಗಪ್ಪ ಗುಣಕಿ, ಸದಸ್ಯರು, ಹೂವಿನ ಹಿಪ್ಪರಗಿ ಗ್ರಾಮ ಪಂಚಾಯತಿ, ಬಸವನ ಬಾಗೇವಾಡಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ದಾಖಲಾದ ಪ್ರಕರಣಕ್ಕೆ ಸಂಬಂಧಿಸಿದಂತೆ ಆಪಾದನೆಗಳು ಹಿಂದಿನ ಅವಧಿ ಅಂದರೆ 2010–2015ನೇ ಸಾಲಿಗೆ ಸಂಬಂಧಿಸಿದ್ದು, ಪ್ರಸ್ತುತ ಅವಧಿಗೆ ಸಂಬಂದಿಸಿಲ್ಲವಾದ್ದರಿಂದ ಪ್ರಕರಣವನ್ನು ವಜಾಗೊಳಿಸಲಾಗಿದೆ. ಆದರಿಂದ ಸದರಿ ಸದಸ್ಯರ ಸದಸ್ಯತ್ವವನ್ನು ಮುಂದುವರೆಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಈ ಪ್ರಕರಣದ ವಿಚಾರಣಾ ವರದಿ ಮತ್ತು ದಾಖಲೆಗಳನ್ನು ಪರಿಶೀಲಿಸಲಾಗಿ ಶ್ರೀ ಹಣಮಂತಪ್ಪ ಗಂಗಪ್ಪ ಗುಣಕಿ, ಸದಸ್ಯರು, ಹೂವಿನ ಹಿಪ್ಪರಗಿ ಗ್ರಾಮ ಪಂಚಾಯತಿ, ಬಸವನ ಬಾಗೇವಾಡಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಮಾಡಲಾದ ಆರೋಪಗಳು ಸಾಬೀತಾಗಿಲ್ಲದಿರುವ ಹಿನ್ನೆಲೆಯಲ್ಲಿ ಶ್ರೀ ಹಣಮಂತಪ್ಪ ಗಂಗಪ್ಪ ಗುಣಕಿ, ಸದಸ್ಯರು, ಹೂವಿನ ಹಿಪ್ಪರಗಿ ಗ್ರಾಮ ಪಂಚಾಯತಿ, ಬಸವನ ಬಾಗೇವಾಡಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ಮೇಲಿನ ಆರೋಪಗಳಿಂದ ಇವರನ್ನು ಆರೋಪಮುಕ್ತಗೊಳಿಸಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 65 ಗ್ರಾಪಂಅ 2020 ಬೆಂಗಳೂರು, ದಿನಾಂಕ:09.03.2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಹಣಮಂತಪ್ಪ ಗಂಗಪ್ಪ ಗುಣಕಿ, ಸದಸ್ಯರು, ಹೂವಿನ ಹಿಪ್ಪರಗಿ ಗ್ರಾಮ ಪಂಚಾಯತಿ, ಬಸವನ ಬಾಗೇವಾಡಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಡಿಯಲ್ಲಿ ನಡೆಸಿರುವ ವಿಚಾರಣೆಯಲ್ಲಿ ಇವರ ಮೇಲೆ ಮಾಡಲಾದ ಆರೋಪಗಳು ಸಾಬೀತಾಗಿಲ್ಲದಿರುವುದರಿಂದ ಇವರನ್ನು ಆರೋಪಮುಕ್ತಗೊಳಿಸಿ ಆದೇಶಿಸಿದೆ. ಮತ್ತು ಪ್ರಕರಣದಲ್ಲಿ ಉಂಟಾಗಿರುವ ನಷ್ಟವನ್ನು ಖಚಿತಪಡಿಸಿಕೊಂಡು ವಸೂಲಿ ಮಾಡಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

B. Naveenkumar 9/03/2020
(ಬಿ. ನವೀನ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,(ಗ್ರಾ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

09/03/2020

**ಪ್ರತಿ:**

1) ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ.
2) ಜಿಲ್ಲಾಧಿಕಾರಿಗಳು, ವಿಜಯಪುರ ಜಿಲ್ಲೆ.
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ವಿಜಯಪುರ ಜಿಲ್ಲೆ.

4) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಬಸವನ ಬಾಗೇವಾಡಿ ತಾಲ್ಲೂಕು, ವಿಜಯಪುರ ಜಿಲ್ಲೆ.
5) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹೂವಿನ ಹಿಪ್ಪರಗಿ ಗ್ರಾಮ ಪಂಚಾಯತಿ, ಬಸವನ ಬಾಗೇವಾಡಿ ತಾಲ್ಲೂಕು ವಿಜಯಪುರ ಜಿಲ್ಲೆ.
6) ಶ್ರೀ ಹಣಮಂತಪ್ಪ ಗಂಗಪ್ಪ ಗುಣಕಿ, ಸದಸ್ಯರು, ಹೂವಿನ ಹಿಪ್ಪರಗಿ ಗ್ರಾಮ ಪಂಚಾಯತಿ, ಬಸವನ ಬಾಗೇವಾಡಿ ತಾಲ್ಲೂಕು, ವಿಜಯಪುರ ಜಿಲ್ಲೆ **(ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಬಸವನ ಬಾಗೇವಾಡಿ ತಾಲ್ಲೂಕು ವಿಜಯಪುರ ಜಿಲ್ಲೆ ಇವರ ಮುಖಾಂತರ)**

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.
4) ಗಣಕ ಕೋಶ.